# ಹಿಂಬರಹ

ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2016 / 4524 ದಿನಾಂಕ: 08-02-2017

ಕರ್ನಾಟಕ ಸರ್ಕಾರದ ಅನಧಿಕೃತ ಟಿಪ್ಪಣಿ ಪತ್ರ ಸಂಖ್ಯೆ:**ಇಡಿ**,163.**ಅಅವಿ**.2016 **ಬೆಂಗಳೂರು ದಿನಾಂಕ**; 09.12.2016ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್, ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು, [ಆಡಳಿತ], ಆಡಳಿತಾಧಿಕಾರಿ. ರಿಜಿಸ್ಟ್ರಾರ್ [ಆಡಳಿತ]. ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಗಳಿಗೆ ಮಾಹಿತಿಗಾಗಿ.
3. ನಿರ್ದೇಶಕರ ಆಪ್ತ ಶಾಖೆಗೆ
6. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಗಳಿಗೆ
4. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

ಆಡಳಿತಾಧಿಕಾರಿ

Sh-est(9) Endsmnt

113

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 163 ಅಅವಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:09.12.2016.

**ಅನಧಿಕೃತ ಟಿಪ್ಪಣಿ**

**ವಿಷಯ:** ಸಂಸತ್ ಸದಸ್ಯರು, ವಿಧಾನ ಮಂಡಲದ ಸದಸ್ಯರುಗಳನ್ನು ಸರ್ಕಾರಿ ಸಮಾರಂಭಗಳಿಗೆ ಆಹ್ವಾನಿಸುವಾಗ ಪಾಲಿಸಬೇಕಾದ ಶಿಷ್ಟಾಚಾರ ನೀತಿ ನಿಯಮಗಳ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,(ರಾಜ್ಯ ಶಿಷ್ಟಾಚಾರ) ಇವರ ಪತ್ರ ಸಂಖ್ಯೆ:ಸಿಆಸುಇ 28 ಶಿರಾಅ 2016, ದಿನಾಂಕ:19.10.2016ರ ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ತಿಳಿಸಿರುವಂತೆ ಮಾನ್ಯ ಸಂಸತ್ ಸದಸ್ಯರು, ವಿಧಾನ ಮಂಡಲದ ಸದಸ್ಯರುಗಳನ್ನು ಸರ್ಕಾರಿ ಸಮಾರಂಭಗಳಿಗೆ ಆಹ್ವಾನಿಸುವಾಗ ಪಾಲಿಸಬೇಕಾದ ಶಿಷ್ಟಾಚಾರದ ಸಂಬಂಧ ಜಾರಿಯಲ್ಲಿರುವ ಸರ್ಕಾರಿ ಆದೇಶ/ಸುತ್ತೋಲೆಗಳ (ಈ ಸರ್ಕಾರಿ ಸುತ್ತೋಲೆ, ಆದೇಶಗಳು ಅಂತರ್ಜಾಲ www.dpar.kar.nic.in ನಲ್ಲಿ ಲಭ್ಯವಿರುತ್ತವೆ.)ರೀತ್ಯಾ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳ ಹಕ್ಕುಚ್ಯುತಿ ಉಂಟಾಗುವಂತಹ ಸನ್ನಿವೇಶ/ಪ್ರಕರಣಗಳು ಮರುಕಳಿಸದಂತೆ ಕ್ರಮವಹಿಸುವಂತೆ ಕೋರಿದೆ.

(ಎಂ.ಎ ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯ-2 & ಸಾಮಾನ್ಯ-2).

14/12/16

**ಇವರಿಗೆ,**

1) ಸರ್ಕಾರದ ಅಧೀನ ಕಾರ್ಯದರ್ಶಿ(ಕಾಲೇಜು ಶಿಕ್ಷಣ)
2) ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ ಶಿಕ್ಷಣ)
3) ಸರ್ಕಾರದ ಅಧೀನ ಕಾರ್ಯದರ್ಶಿ(ವಿಶ್ವವಿದ್ಯಾಲಯ-1)
4) ಸರ್ಕಾರದ ಅಧೀನ ಕಾರ್ಯದರ್ಶಿ(ವಿಶ್ವವಿದ್ಯಾಲಯ-2)

112 (2)

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 28 ಶಿಶಾಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 19.10.2016

ಇವರಿಂದ:
ಸರ್ಕಾರದ ಮುಖ್ಯ ಕಾರ್ಯದರ್ಶಿ,
ವಿಧಾನ ಸೌಧ,
ಬೆಂಗಳೂರು.

RPAD

ಇವರಿಗೆ:
ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/
ಕಾರ್ಯದರ್ಶಿಗಳು/ಇಲಾಖಾ ಮುಖ್ಯಸ್ಥರು.

ಮಾನ್ಯರೆ,

ವಿಷಯ: ಸಂಸತ್ ಸದಸ್ಯರು, ವಿಧಾನ ಮಂಡಲದ ಸದಸ್ಯರುಗಳನ್ನು ಸರ್ಕಾರಿ ಸಮಾರಂಭಗಳಿಗೆ ಆಹ್ವಾನಿಸುವಾಗ ಪಾಲಿಸಬೇಕಾದ ಶಿಷ್ಟಾಚಾರ ನೀತಿ ನಿಯಮಗಳ ಬಗ್ಗೆ

ಉಲ್ಲೇಖ: ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕವಿಪ/ಶಾರಶಾ/136/ಹಬಾ/2016, ದಿನಾಂಕ: 01.10.2016

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯದರ್ಶಿಗಳು, ವಿಧಾನ ಪರಿಷತ್‌ರವರ ತಮ್ಮ ಪತ್ರದಲ್ಲಿ ದಿನಾಂಕ: 22.09.2016ರಂದು ನಡೆದ ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಹಾಗೂ ಮಾನ್ಯ ಸದಸ್ಯರುಗಳು ಸರ್ಕಾರದ ವತಿಯಿಂದ ನಡೆಸಲಾಗುವ ಸಮಾರಂಭಗಳಿಗೆ ಆಹ್ವಾನಿಸುವಾಗ ಶಿಷ್ಟಾಚಾರ ಕುರಿತಂತೆ ಪಾಲಿಸಬೇಕಾದ ನೀತಿ ನಿಯಮಾವಳಿಗಳು ಜಾರಿಯಲ್ಲಿದ್ದರೂ ಸಹ ಅಧಿಕಾರಿಗಳಿಂದ ಶಿಷ್ಟಾಚಾರ ಉಲ್ಲಂಘನೆಯಾಗಿ ಸಮಾರಂಭಗಳಲ್ಲಿ ಮಾನ್ಯ ಸದಸ್ಯರುಗಳಿಗೆ ಮುಜುಗರ ಉಂಟಾಗುವಂತಹ ಪ್ರಸಂಗಗಳು ಎದುರಾಗಿ ಹಕ್ಕುಚ್ಯುತಿ ಪ್ರಕರಣಗಳು ಹೆಚ್ಚಾಗುತ್ತಿರುವ ಕಾರಣದಿಂದಾಗಿ ತೀವ್ರವಾದ ಅಸಮಾಧಾನ ಹಾಗೂ ಬೇಸರವನ್ನು ವ್ಯಕ್ತಪಡಿಸಿರುತ್ತಾರೆ, ಆದುದರಿಂದ ಶಿಷ್ಟಾಚಾರದ ಸಂಬಂಧ ಜಾರಿಯಲ್ಲಿರುವ ಸರ್ಕಾರಿ ಆದೇಶ/ಸುತ್ತೋಲೆಗಳ ರೀತ್ಯಾ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳ ಹಕ್ಕುಚ್ಯುತಿ ಉಂಟಾಗುವಂತಹ ಸನ್ನಿವೇಶ/ಪ್ರಕರಣಗಳು ಮರುಕಳಿಸದಂತೆ ಕ್ರಮವಹಿಸಲು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೂ ಹಿರಿಯ ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನವನ್ನು ನೀಡಬೇಕೆಂಧು ಕೋರಿರುತ್ತಾರೆ.

ಈಗಾಗಲೇ ಹಲವಾರು ಸಂದರ್ಭಗಳಲ್ಲಿ ಸರ್ಕಾರದ ಸಭೆ ಸಮಾರಂಭಗಳಿಗೆ ಮಾನ್ಯ ಶಾಸಕರುಗಳನ್ನು ಆಹ್ವಾನಿಸುವಾಗ ಶಿಷ್ಟಾಚಾರ ಕುರಿತಂತೆ ಪಾಲಿಸಬೇಕಾದ ನೀತಿ ನಿಯಮಗಳ ಬಗ್ಗೆ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಎಲ್ಲಾ ನೀತಿ ನಿಯಮಗಳ ಆದೇಶಗಳ ಸಂಗ್ರಹವನ್ನು ಇತ್ತೀಚೆಗೆ ಮರು ಮುದ್ರಿಸಲಾಗಿದ್ದು, ಸದರಿ ಸುತ್ತೋಲೆಗಳ ಸಂಗ್ರಹವನ್ನು ಮತ್ತೊಮ್ಮೆ ಇದರೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗುತ್ತಿದ್ದು, ಶಿಷ್ಟಾಚಾರದ ಸಂಬಂಧ ಜಾರಿಯಲ್ಲಿರುವ ಸರ್ಕಾರಿ ಆದೇಶ/ಸುತ್ತೋಲೆಗಳ ರೀತ್ಯಾ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳ ಹಕ್ಕುಚ್ಯುತಿ ಉಂಟಾಗುವಂತಹ ಸನ್ನಿವೇಶ/ಪ್ರಕರಣಗಳು ಮರುಕಳಿಸದಂತೆ ಕ್ರಮವಹಿಸುವಂತೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

C. no - 2/151 / 2016

19/10

(ಡಾ. ಬಿ.ಎಸ್.ಮಂಜುನಾಥ ಸ್ವಾಮಿ ಕೆ.ಎ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಿಆಸುಇ(ರಾಜ್ಯ ಶಿಷ್ಟಾಚಾರ)

25/11/2016

24/11

ಪ್ರತಿಯನ್ನು ಮಾಹಿತಿಗಾಗಿ:

ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್, ವಿಧಾನಸೌಧ, ಬೆಂಗಳೂರು

ಸಂಸತ್ ಸದಸ್ಯರು : ವಿಧಾನ ಮಂಡಲದ ಸದಸ್ಯರುಗಳನ್ನು
ಸರ್ಕಾರಿ ಸಮಾರಂಭಗಳಿಗೆ ಆಹ್ವಾನಿಸುವ ಬಗ್ಗೆ : ಅವರುಗಳಿಂದ ಬಂದ
ಪತ್ರಗಳಿಗೆ ಉತ್ತರಿಸುವಲ್ಲಿ ಹಾಗೂ ಶಿಷ್ಟಾಚಾರ ಕುರಿತಂತೆ ಪಾಲಿಸಬೇಕಾದ
ನೀತಿ ನಿಯಮಗಳ : ಆದೇಶ : ಸುತ್ತೋಲೆಗಳ ಸಂಗ್ರಹ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜ್ಯ ಶಿಷ್ಟಾಚಾರ)

ಈ ಸುತ್ತೋಲೆ, ಆದೇಶಗಳು ಅಂತರ್ಜಾಲ
www.dpar.kar.nic.in ನಲ್ಲಿ
ಲಭ್ಯವಿರುತ್ತದೆ.



O 160-1